ಕುಂದಾಪುರ ತಾಲ್ಲೂಕಿನಲ್ಲಿರುವ ಶರಾಬು ಅಂಗಡಿಗಳ ಸಂಖ್ಯೆ

773 - ಶ್ರೀ ಗೋಪಾಲ ಪೂಜಾರಿ .ಕೆ (ಬೈಂದೂರು) : ಮಾನ್ಯ ಅಬಕಾರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಂದಾಪುರ ತಾಲ್ಲೂಕಿನಲ್ಲಿ ಇರುವ ಒಟ್ಟು ಅಧಿಕೃತ ಶರಾಬು ಅಂಗಡಿಗಳೆಷ್ಟು?

ಆ) ಶರಾಬು ಅಂಗಡಿಗಳ ಬ್ರಾಂಚುಗಳಿಗೆ ಅಧಿಕೃತ ಪರವಾನಗಿವಿದೆಯೇ?

ಇ) ಇಲ್ಲವಾದಲ್ಲಿ ಅನಧಿಕೃತ ಶರಾಬು ಅಂಗಡಿಗಳ ಬಗ್ಗೆ ಕೈಗೊಳ್ಳುವ ಕ್ರಮವೇನು?

ಶ್ರೀ ಎಂ.ಎಂ. ನಾಣಯ್ಯ (ಅಬಕಾರಿ ರಾಜ್ಯ ಸಚಿವರು) :

ಅ) 119

ಆ) ಇಲ್ಲ.

ಇ) ಅನಧಿಕೃತ ಶರಾಬು ಅಂಗಡಿಗಳು ಕಂಡು ಬಂದಲ್ಲಿ ಅಂತಹ ಅಂಗಡಿಗಳನ್ನು ಮುಚ್ಚಿಸಲು ಕಾನೂನು ರೀತ್ಯಾ ಕ್ರಮ ಕೈಗೊಳ್ಳುವುದು.

ಶಿರಹಟ್ಟಿ ಮತಕ್ಷೇತ್ರದಲ್ಲಿ ಪಡಿತರ ಚೀಟಿ ವಿತರಣೆ

776 - ಶ್ರೀ ಗಡ್ಡದೇವರಮಠ ಗದ್ದಯ್ಯ ಶಿವಮೂರ್ತಯ್ಯ (ಶಿರಹಟ್ಟಿ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿರಹಟ್ಟಿ ಮತ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನೇಕಾರರಿಗೆ, ಬೀಡಿ ಕಾರ್ಮಿಕರಿಗೆ ಹಾಗೂ ಕೊಳಚೆ ಪ್ರದೇಶದ ಜನರಿಗೆ ಹಸಿರು ಪಡಿತರ ಚೀಟಿ ವಿತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕೂಡಲೇ ಈ ಪಡಿತರ ಚೀಟಿಗಳನ್ನು ವಿತರಿಸಲು ಸರ್ಕಾರವು ಕ್ರಮಕೈಗೊಳ್ಳುವುದೇ?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕರ ಸರಬರಾಜು ರಾಜ್ಯ ಸಚಿವರು) :

ಅ) ಕುಟುಂಬದ ಆದಾಯವನ್ನು ಆಧರಿಸಿ ಅರ್ಹ ಕುಟುಂಬಗಳಿಗೆ ಹಸಿರು ಪಡಿತರ ಚೀಟಿಗಳನ್ನು ವಿತರಿಸಲಾಗುತ್ತಿದೆ. ಆದರೆ ಕುಟುಂಬಗಳ ವಾಸಸ್ಥಳ ಅಥವಾ ಉದ್ಯೋಗವನ್ನು ಆಧರಿಸಿದ ವರ್ಗೀಕರಣವನ್ನು ಈಗ ಅನುಸರಿಸುತ್ತಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.